# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 831 |
| ಸದಸ್ಯರ ಹೆಸರು | : | ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 09.03.2021. |
| ಉತ್ತರಿಸುವವರು | : | ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೇಂದ್ರ ಮತ್ತು ರಾಜ್ಯ ಸರ್ಕಾರದ ನೀತಿ ಹಾಗೂ ಹಲವಾರು ಕಾರಣಗಳಿಂದ ಸಣ್ಣ ಕೈಗಾರಿಕೆಗಳು ಸಂಕಷ್ಟಗಳನ್ನು ಎದುರಿಸುತ್ತಿದ್ದು ಇದರ ಪುನಶ್ಚೇತನಕ್ಕೆ ಸರ್ಕಾರ ಯಾವುದಾದರೂ ಯೋಜನೆ ರೂಪಿಸಿದೆಯೇ; | ಪ್ರಸ್ತುತ ಕೋವಿಡ್ ರೋಗಾಣು ಹರಡುವಿಕೆಯ ಸನ್ನಿವೇಶದಲ್ಲಿ ಸಣ್ಣ ಕೈಗಾರಿಕೆಗಳು ಸಂಕಷ್ಟಗಳನ್ನು ಎದುರಿಸುತ್ತಿದ್ದು ಇದರ ಪುನಶ್ಚೇತನಕ್ಕೆ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ರೂಪಿಸಿರುವ ಯೋಜನೆಗಳು ಈ ಕೆಳಗಿನಂತಿವೆ:<br><br>ಕೇಂದ್ರ ಸರ್ಕಾರ ಘೋಷಿಸಿರುವ "ಆತ್ಮ ನಿರ್ಭರ ಭಾರತ ಅಭಿಯಾನ" ದ ಅಡಿಯಲ್ಲಿ ಅತೀ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳನ್ನು ಪುನಶ್ಚೇತನಗೊಳಿಸಲು ಮತ್ತು ಉದ್ಯಮಗಳಿಗೆ ಆರ್ಥಿಕ ನೆರವು ನೀಡುವ ಯೋಜನೆಯಲ್ಲಿ ಈ ಕೆಳಗಿನ ನೆರವು ದೊರೆತಿದೆ.<br><br>ಭಾರತ ಸರ್ಕಾರವು "ಇ.ಸಿ.ಎಲ್.ಜಿ"–ಎಮರ್ಜೆನ್ಸಿ ಕ್ರೆಡಿಟ್ ಲೈನ್ ಗ್ಯಾರಂಟಿ ಯೋಜನೆಯನ್ನು ಜಾರಿಗೆ ತಂದಿದ್ದು ಇದರನ್ವಯ ಫೆಬ್ರವರಿ 2020ರ ಅಂತ್ಯಕ್ಕೆ ಬ್ಯಾಂಕ್‌ಗಳಲ್ಲಿ ಬಾಕಿ ಇರುವ ಎಂ.ಎಸ್.ಎಂ.ಇ ಘಟಕಗಳ ಸಾಲದ ಮೊತ್ತಕ್ಕೆ ಶೇ 20% ರಷ್ಟು ಹೆಚ್ಚುವರಿ ಸಾಲವನ್ನು ಯಾವುದೇ ಹೆಚ್ಚುವರಿ ಖಾತರಿ ಇಲ್ಲದೇ ನೀಡುವ ಯೋಜನೆಯನ್ನು ಜಾರಿಗೆ ತಂದಿರುತ್ತದೆ.<br><br>ರಾಜ್ಯ ಸರ್ಕಾರವು ಕೊರೋನದಿಂದ ಸಂಕಷ್ಟದಲ್ಲಿರುವ ಕೈಗಾರಿಕೆಗಳ ಪುನಶ್ಚೇತನಕ್ಕೆ ಜಾರಿಗೆ ತಂದ ಯೋಜನೆಗಳ ವಿವರಗಳು ಈ ಕೆಳಗಿನಂತಿವೆ.<br>1. ಇಂಧನ ಇಲಾಖೆಯು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಏಪ್ರಿಲ್ ಮತ್ತು ಮೇ 2020 ತಿಂಗಳ ಬೇಡಿಕೆ ಶುಲ್ಕ ಮತ್ತು ಸ್ಥಿರ ಶುಲ್ಕವನ್ನು ಮನ್ನಾ ಮಾಡಿರುತ್ತದೆ.<br>2. ಇಂಧನ ಇಲಾಖೆಯು ವಿದ್ಯುತ್ ಬಿಲ್‌ನ್ನು ಪ್ರಾಮಾಣಿಕವಾಗಿ ನಿಗದಿತ ಅವಧಿಯೊಳಗೆ ಪಾವತಿಸುವ ಕೈಗಾರಿಕೆಗಳಿಗೆ ರಿಯಾಯಿತಿಯನ್ನು ನೀಡಿರುತ್ತದೆ. ಹೆಚ್‌ಟಿ ಗರಿಷ್ಠ ಮಿತಿ ರೂ.1 ಲಕ್ಷ, ಎಲ್‌ಟಿ ಗರಿಷ್ಠ ಮಿತಿ ರೂ.10,000/–<br>• 1 ರಿಂದ 5 ದಿನದೊಳಗೆ ಪಾವತಿಸಿದಲ್ಲಿ — ಶೇ 1% ರಿಯಾಯಿತಿ<br>• 6 ರಿಂದ 15 ದಿನದೊಳಗೆ ಪಾವತಿಸಿದಲ್ಲಿ — ಶೇ 0.5% ರಿಯಾಯಿತಿ<br>• 15 ರಿಂದ 30 ದಿನದೊಳಗೆ ಪಾವತಿಸಿದಲ್ಲಿ — ಯಾವುದೇ ರಿಯಾಯಿತಿ ಇರುವುದಿಲ್ಲ<br>3. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಉದ್ಯಮಶೀಲರು ತಮಗೆ ಹಂಚಿಕೆಯಾದ ನಿವೇಶನಗಳ ಕಂತು ಮಾರ್ಚ್, ಏಪ್ರಿಲ್ ಮತ್ತು ಮೇ 2020 ತಿಂಗಳಲ್ಲಿ ಪಾವತಿಸದಿದ್ದಲ್ಲಿ ಆ ಪಾವತಿಯನ್ನು ಕ್ರಮವಾಗಿ 3 ತಿಂಗಳು ಮುಂದೂಡಲಾಗಿದೆ ಮತ್ತು ಈ ಮೊತ್ತಕ್ಕೆ ಯಾವುದೇ ಬಡ್ಡಿಯನ್ನು ವಿಧಿಸುವುದಿಲ್ಲ.<br>4. ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮವು ಉದ್ಯಮಶೀಲರು ತಮಗೆ ಹಂಚಿಕೆಯಾದ ನಿವೇಶನಗಳ ಕಂತು, ಮಳಿಗೆಗಳ ಬಾಡಿಗೆ ಮತ್ತು ನೀರಿನ ಶುಲ್ಕಗಳ ಏಪ್ರಿಲ್ ಮತ್ತು ಮೇ 2020 ತಿಂಗಳುಗಳ ಕಂತನ್ನು ಈ ಕೆಳಗಿನಂತೆ ಪಾವತಿಸಲು ಅವಕಾಶ ಕಲ್ಪಿಸಲಾಗಿದೆ. ಇದಕ್ಕೆ ಯಾವುದೇ ಬಡ್ಡಿಯನ್ನು ವಿಧಿಸಲಾಗುವುದಿಲ್ಲ. |

<table>
<tr><td></td><td></td><td>

| | |
|---|---|
| ಏಪ್ರಿಲ್ 2020 ತಿಂಗಳ ಕಂತು | ಜೂನ್ 2020 ತಿಂಗಳ ಕಂತಿನ ಜೊತೆ ಪಾವತಿಸತಕ್ಕದ್ದು |
| ಮೇ 2020 ತಿಂಗಳ ಕಂತು | ಜುಲೈ 2020 ತಿಂಗಳ ಕಂತಿನ ಜೊತೆ ಪಾವತಿಸತಕ್ಕದ್ದು |
| ಜೂನ್ 2020 ತಿಂಗಳ ಕಂತು | ಆಗಸ್ಟ್ 2020 ತಿಂಗಳ ಕಂತಿನ ಜೊತೆ ಪಾವತಿಸತಕ್ಕದ್ದು |

</td></tr>
<tr><td>ಆ)</td><td>ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗಾಗಿ ಹಾಗೂ ಸುಧಾರಣೆಗಾಗಿ ಸರ್ಕಾರದ ಮುಂದಿರುವ ಕಾರ್ಯಕ್ರಮಗಳಾವುವು; ಹಾಗೂ ಸಹಾಯಧನ ನೀಡುವ ಯೋಜನೆ ಇದೆಯೇ;</td><td>ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗಾಗಿ ಹಾಗೂ ಸುಧಾರಣೆಗಾಗಿ ಸರ್ಕಾರವು ಹಲವಾರು ಕಾರ್ಯಕ್ರಮಗಳನ್ನು ರೂಪಿಸಿದ್ದು ವಿವರಗಳು ಈ ಕೆಳಗಿನಂತಿರುತ್ತವೆ.<br><br>1. ಎಂ.ಎಸ್.ಎಂ.ಇ ಗಳಿಗೆ ಪ್ರೋತ್ಸಾಹ ನೀಡಲು ಸರ್ಕಾರವು ಸರ್ಕಾರದ ಆದೇಶ ಸಂ. ಸಿಐ 199 ಎಸ್‌ಪಿಐ 2018, ದಿನಾಂಕ: 13.8.2020 ರನ್ವಯ ಹೊಸ ಕೈಗಾರಿಕಾ ನೀತಿ 2020-25 ನ್ನು ಜಾರಿಗೆ ತಂದಿರುತ್ತದೆ. ಇದರನ್ವಯ ದೊರೆಯುವ ಪ್ರೋತ್ಸಾಹ ಮತ್ತು ರಿಯಾಯಿತಿಗಳು ಈ ಕೆಳಗಿನಂತಿವೆ:<br>1. ಮುದ್ರಾಂಕ ಶುಲ್ಕ ವಿನಾಯಿತಿ<br>2. ನೋಂದಣಿ ಶುಲ್ಕ ರಿಯಾಯಿತಿ.<br>3. ಬಂಡವಾಳ ಹೂಡಿಕೆ ಸಹಾಯಧನ<br>4. ಕಿರು ಮತ್ತು ಸಣ್ಣ ಕೈಗಾರಿಕೆಗಳಿಗೆ ವಿದ್ಯುತ್ ಸಹಾಯಧನ<br>5. ಭೂ ಪರಿವರ್ತನಾ ಶುಲ್ಕ ಮರುಪಾವತಿ.<br>6. ರಫ್ತು ಆಧಾರಿತ ಘಟಕಗಳಿಗೆ ರಿಯಾಯಿತಿ.<br>7. ತ್ಯಾಜ್ಯ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಸಹಾಯಧನ.<br>8. ವಿದ್ಯುತ್ ತೆರಿಗೆ ವಿನಾಯಿತಿ<br>9. ತಾಂತ್ರಿಕ ಉನ್ನತೀಕರಣ, ಗುಣಮಟ್ಟ ಪ್ರಮಾಣ ಪತ್ರ ಸಹಾಯಧನ<br>10. ಮಳೆ ನೀರುಕೊಯ್ಲು / ಸಂರಕ್ಷಣೆ ಸಹಾಯಧನ<br><br>2. ಕೇಂದ್ರ ಸರ್ಕಾರದ ಪ್ರಧಾನಮಂತ್ರಿಗಳ ಉದ್ಯೋಗ ಸೃಜನಾ ಯೋಜನೆಯಡಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಗರಿಷ್ಟ ಸಾಲ ರೂ.25 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು ಹಾಗೂ ಯೋಜನಾ ವೆಚ್ಚದ ಮೇಲೆ ಶೇ. 15 ರಿಂದ ಶೇ.35 ರವರೆಗೆ ಗರಿಷ್ಟ ರೂ.3.75 ಲಕ್ಷದಿಂದ ರೂ.8.75 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ.<br><br>3. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳು ಸ್ಥಾಪಿಸಲು ರೂ.5.00 ಕೋಟಿಗಳವರೆಗೆ ಸಾಲ ಪಡೆದು ನಿಗದಿತ ಸಮಯದಲ್ಲಿ ಮರುಪಾವತಿ ಮಾಡಿದ ಅತಿ ಸಣ್ಣ ಮತ್ತು ಸಣ್ಣ ಕೈಗಾರಿಕಾ ಘಟಕಗಳಿಗೆ 5 ವರ್ಷಗಳ ಅವಧಿಗೆ ಶೇಕಡ 6 ರಂತೆ ಬಡ್ಡಿ ಸಹಾಯಧನ ನೀಡಲಾಗುವುದು.<br><br>4. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಶೇ 75 ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನಗಳನ್ನು (ಗರಿಷ್ಟ 2 ಎಕರೆ) ಮತ್ತು ಕೈಗಾರಿಕಾ ಶೆಡ್‌ಗಳನ್ನು ನೀಡಲಾಗುತ್ತಿದೆ.<br><br>5. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿಯಲ್ಲಿ ಗುಡಿ</td></tr>
</table>

| | | |
|---|---|---|
| | | ಮತ್ತು ಸೂಕ್ಷ್ಮ ಕೈಗಾರಿಕೆ ಘಟಕಗಳನು ಸ್ಥಾಪಿಸಲು ಗರಿಷ್ಠ ರೂ.10.00 ಲಕ್ಷ ಯೋಜನಾ ವೆಚ್ಚದ ಮೇಲೆ ಶೇ. 60 ರಷ್ಟು ಗರಿಷ್ಠ ರೂ.5.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.<br>6. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಮೊದಲ ಪೀಳಿಗೆಯ ಉದ್ಯಮಿದಾರರು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದು ಸ್ಥಾಪಿಸುವ ಹೊಸ ಘಟಕಗಳಿಗೆ ಗರಿಷ್ಠ ರೂ.2.00 ಕೋಟಿ ಯೋಜನಾ ವೆಚ್ಚದಲ್ಲಿ The Debt Equity Ratio 2:1 ಪ್ರಕಾರ (2/3 ರಷ್ಟು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಮತ್ತು 1/3 ಪ್ರವರ್ತಕರ ಬಂಡವಾಳ) ಘಟಕಕ್ಕೆ ಪ್ರವರ್ತಕ ಬಂಡವಾಳ ಹೂಡಿಕೆಯ 1/3 ರಲ್ಲಿ ಶೇ.50 ರಷ್ಟು ಬಡ್ಡಿರಹಿತ ಗರಿಷ್ಠ ರೂ.33 ಲಕ್ಷ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ನೀಡಲಾಗುತ್ತಿದೆ. |
| ಇ) | ಸಣ್ಣ ಕೈಗಾರಿಕೆಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರ ಹಿತದೃಷ್ಟಿಯಿಂದ ಯಾವುದಾದರೂ ಹೊಸ ಯೋಜನೆ ರೂಪಿಸಲಾಗಿದೆಯೇ? (ವಿವರಗಳನ್ನು ನೀಡುವುದು) | ಸಣ್ಣ ಕೈಗಾರಿಕೆಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರಿಗೆ ಸಂಬಂಧಿಸಿದಂತೆ ಯಾವುದೇ ಹೊಸ ಯೋಜನೆ ರೂಪಿಸಿರುವುದಿಲ್ಲ. |

**ಸಿಐ 13 ಸಿಎಸ್‌ಸಿ 2021**

*(ಸಿ.ಸಿ. ಪಾಟೀಲ್)*
ಸಣ್ಣ ಕೈಗಾರಿಕೆ ಹಾಗೂ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು.